ಸಿಸಿ ನಂ. 214/2022 ಪಿಡಬ್ಲೂ :1

ದಿನಾಂಕಃ 27-04-2023 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾಯಿತು.

ಫಿರ್ಯಾದುದಾರ ಸಂಸ್ಥೆಯ ವ್ಯವಸ್ಥಾಪಕರ ಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆ ಎಂದು ಹಾಗೂ ಸದರಿ ವ್ಯವಸ್ಥಾಪಕರನ್ನು ಪಿಡಬ್ಲ್ಯೂ-1 ಎಂದು ಪರಿಗಣಿಸಲಾಗಿದೆ .

**ಮುಂದುವರಿದ ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರವಾಗಿಃ ಶ್ರೀ ವಾಯ್ ವಿ ಎಸ್ ವಕೀಲರಿಂದಃ**

1. ಫಿರ್ಯಾದುದಾರ ಸಂಸ್ಥೆಯ ನಿರ್ದೇಶಕ ಮಂಡಳಿಯ ಸಭೆಯಲ್ಲಿ ಮಂಡಿಸಿರುವ ಠರಾವಿನ ಯಥಾ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -1 ಎಂದು ಗುರುತಿಸಲಾಯಿತು. ಆರೋಪಿಯು ನೀಡಿದ ಚೆಕ್ ಹಾಜರು ಪಡಿಸಿದ್ದು ಅದನ್ನು ನಿಪಿ -2 ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ-2 ಎ ಎಂದು ಗುರುತಿಸಲಾಯಿತು. ಬ್ಯಾಂಕನವರು ಕೊಟ್ಟಿರುವ ಮೆಮೊವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -3 ಎಂದು ಗುರುತಿಸಲಾಯಿತು. ನಾವು ನಮ್ಮ ವಕೀಲರ ಮುಖಾಂತರ ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -4 ಎಂದು, ಅಂಚೆ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ -5 ಎಂದು ಗುರುತಿಸಲಾಯಿತು . ಅಂಚೆ ಕಚೇರಿಯವರು ಕೊಟ್ಟಿರುವ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ -6 ಎಂದು ಗುರುತಿಸಲಾಯಿತು. ಎರಡು ಸಾಲದ ಅರ್ಜಿಗಳ ಯಥಾ ನಕಲುಗಳನ್ನು ಹಾಜರು ಪಡಿಸಿರುತ್ತೇವೆ . ಸದರಿ ಸಾಲದ ಅರ್ಜಿಗಳ ಮೂಲ ಪ್ರತಿಗಳನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಸಾಲದ ಅರ್ಜಿಗಳ ಯಥಾ ನಕಲುಗಳನ್ನು ನಿಪಿ-7 ಮತ್ತು 8 ಎಂದು ಗುರುತಿಸಲಾಯಿತು . ಎರಡು ಕರಾರು ಪತ್ರಗಳ ಯಥಾ ನಕಲುಗಳನ್ನು ಹಾಜರು ಪಡಿಸಿರುತ್ತೇವೆ . ಸದರಿ ಕರಾರು ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಕರಾರು ಪತ್ರಗಳ ಯಥಾ ನಕಲುಗಳನ್ನು ನಿಪಿ -9 ಮತ್ತು 10 ಎಂದು ಗುರುತಿಸಲಾಯಿತು .

2. ಎರಡು ಹೈಪೋಥಿಕೇಶನ್ ಕರಾರು ಪತ್ರಗಳ ಯಥಾ ನಕಲುಗಳನ್ನು ಹಾಜರು ಪಡಿಸಿರುತ್ತೇವೆ . ಸದರಿ ಹೈಪೋಥಿಕೇಶನ್ ಕರಾರು ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಹೈಪೋಥಿಕೇಶನ್ ಕರಾರು ಪತ್ರಗಳ ಯಥಾ ನಕಲುಗಳನ್ನು ನಿಪಿ-11 ಮತ್ತು 12 ಎಂದು ಗುರುತಿಸಲಾಯಿತು . ಎರಡು ಡಿಮಾಂಡ್ ಪ್ರಾಮಿಸರಿ ನೋಟುಗಳ ಯಥಾ ನಕಲುಗಳನ್ನು ಹಾಜರು ಪಡಿಸಿರುತ್ತೇವೆ . ಸದರಿ ಡಿಮಾಂಡ್ ಪ್ರಾಮಿಸರಿ ನೋಟಗಳ ಮೂಲ ಪ್ರತಿಗಳನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಡಿಮಾಂಡ್ ಪ್ರಾಮಿಸರಿ ನೋಟುಗಳ ಯಥಾ ನಕಲುಗಳನ್ನು ನಿಪಿ-13 ಮತ್ತು 14 ಎಂದು ಗುರುತಿಸಲಾಯಿತು . ಎರಡು ಹಣ ಪಡೆದ ಪಾವತಿಗಳ ಯಥಾ ನಕಲುಗಳನ್ನು ಹಾಜರು ಪಡಿಸಿರುತ್ತೇವೆ . ಸದರಿ ಹಣ ಪಡೆದ ಪಾವತಿಗಳ ಮೂಲ ಪ್ರತಿಗಳನ್ನು ಪರಿಶೀಲಿಸಿ ಸಾಕ್ಷಿಗೆ ವಾಪಸ್ಸು ನೀಡಲಾಯಿತು . ಸದರಿ ಹಣ ಪಡೆದ ಪಾವತಿಗಳ ಯಥಾ ನಕಲುಗಳನ್ನು ನಿಪಿ-15 ಮತ್ತು 16 ಎಂದು ಗುರುತಿಸಲಾಯಿತು . ಎರಡು ಸಾಲದ ಖಾತೆಗಳ ಉತಾರಗಳನ್ನು ಹಾಜರು ಪಡಿಸಿದ್ದು , ಅವುಗಳನ್ನು ನಿಪಿ-17 ಮತ್ತು 18 ಎಂದು ಗುರುತಿಸಲಾಯಿತು .

( ಪಾಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ಕುಮಟಾ.